# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 420
2) ಸದಸ್ಯರ ಹೆಸರು : ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3) ಉತ್ತರಿಸುವ ದಿನಾಂಕ : 23-09-2020
4) ಉತ್ತರಿಸಬೇಕಾದ ಸಚಿವರು : ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | 2019-20ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಯಲ್ಲಿ ಮತ್ಸ್ಯಾಶ್ರಯ ಯೋಜನೆಯು ಜಾರಿಯಲ್ಲಿದೆಯೇ ಇದರ ನಿಯಮ ನಿಬಂಧನೆಗಳು ಹಾಗೂ ರೂಪು ರೇಷೆಗಳೇನು; | 2019-20ನೇ ಸಾಲಿನಲ್ಲಿ ಮತ್ಸ್ಯಾಶ್ರಯ ಯೋಜನೆಯಡಿ ಯಾವುದೇ ಮನೆಗಳು ಮಂಜೂರಾಗಿರುವುದಿಲ್ಲ. ಹೀಗಾಗಿ ಮಂಡ್ಯ ಜಿಲ್ಲೆಗೆ ಮನೆಗಳು ಹಂಚಿಕೆಯಾಗಿರುವುದಿಲ್ಲ.<br><br>ಮತ್ಸ್ಯಾಶ್ರಯ ಯೋಜನೆಯಡಿ ವಸತಿ ಸೌಲಭ್ಯ ಪಡೆಯಲು ಅಗತ್ಯವಿರುವ ಷರತ್ತು ಮತ್ತು ನಿಬಂಧನೆಗಳನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ. |
| ಆ) | ಸದರಿ ಯೋಜನೆಯಡಿಯಲ್ಲಿ ಯಾವ ಯಾವ ಸಮುದಾಯಗಳಿಗೆ ವಸತಿ ನಿರ್ಮಾಣ ಮಾಡಿಕೊಡಲಾಗುವುದು; (ವಿವರವಾದ ಮಾಹಿತಿ ನೀಡುವುದು) | ಸದರಿ ಯೋಜನೆಯಡಿ ಮೀನುಗಾರಿಕೆ ವೃತ್ತಿಯಲ್ಲಿ ತೊಡಗಿರುವ ನಿರ್ವಸತಿ ಮೀನುಗಾರರಿಗೆ ವಸತಿ ನಿರ್ಮಾಣಕ್ಕೆ ಸಹಾಯಧನ ನೀಡಲಾಗುವುದು. ಆಯ್ಕೆಯಾದ ಫಲಾನುಭವಿಯೇ ಮನೆ ನಿರ್ಮಾಣ ಮಾಡಿಕೊಳ್ಳುತ್ತಿದ್ದು, ಕಾಮಗಾರಿಯ ಪ್ರಗತಿಗನುಗುಣವಾಗಿ ಅನುಷ್ಠಾನ ಸಂಸ್ಥೆಯಾದ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ (ನಿ), ಮಂಗಳೂರುರವರು ಸಹಾಯಧನದ ಮೊತ್ತವನ್ನು ಮೂರು ಕಂತುಗಳಲ್ಲಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡುತ್ತಾರೆ.<br><br>ಸಾಮಾನ್ಯ ವರ್ಗದ ಫಲಾನುಭವಿಗೆ ರೂ.1.20 ಲಕ್ಷ, ಗ್ರಾಮೀಣ ಭಾಗದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗೆ ರೂ 1.75 ಲಕ್ಷ ಹಾಗೂ ನಗರ ಪ್ರದೇಶದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗೆ ರೂ. 2.00 ಲಕ್ಷ ಸಹಾಯಧನ ನೀಡಲಾಗುವುದು. |
| ಇ) | 2019-20ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಯಲ್ಲಿ ಮತ್ಸ್ಯಾಶ್ರಯ ಯೋಜನೆಯು ಅನುಷ್ಠಾನವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ 2019-20ನೇ ಸಾಲಿನಲ್ಲಿ ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಯಾವುದೇ ಮನೆಗಳು ಮಂಜೂರು ಮಾಡಿರುವುದಿಲ್ಲ. ಹೀಗಾಗಿ ಮಂಡ್ಯ ಜಿಲ್ಲೆಗೆ ಮನೆಗಳು ಹಂಚಿಕೆಯಾಗಿರುವುದಿಲ್ಲ. |
| ಈ) | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮವೇನು? | ಮತ್ಸ್ಯಾಶ್ರಯ ಮನೆಗಳನ್ನು ಅನುದಾನ ಲಭ್ಯತೆ ಮತ್ತು ಬೇಡಿಕೆಗನುಗುಣವಾಗಿ ಹಂಚಿಕೆ ಮಾಡಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-165 ಮೀಇಯೋ 2020

(ಕೋಟ ಶ್ರೀನಿವಾಸ ಪೂಜಾರಿ)
ಮುಜರಾಯಿ, ಮೀನುಗಾರಿಕೆ ಹಾಗೂ
ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

# KARNATAKA LEGISLATIVE COUNCIL

1) Starred LC Question No : 420
2) Name of the Member : Sri Appajigowda N.
(Constituency of Local Bodies)
3) Date of Reply : 23-09-2020
4) To be replied by : Muzrai, Fisheries, Ports and Inland Water Transport Minister

| | Question | Answer |
|---|---|---|
| A | Is Mathsyashraya Scheme has been implemented in Mandya District during 2019-20. What are its terms and conditions; | No houses have been sanctioned during 2019-20 under the Mathsyashraya Scheme. Therefore, houses have not been allocated to Mandya district. Details of terms and conditions to obtain housing benefits under Mathsyashraya Scheme are furnished in **Annexure.** |
| B | Which are the communities covered under this Scheme for construction of houses (furnish details) | Subsidy is provided under this scheme to houseless fishermen who are involved in fisheries activities. beneficiaries themselves will construct the house and the implementing agency i.e., Karnataka Fisheries Development Corporation, Mangalore will release the subsidy amount in three installments directly to beneficiaries bank account corresponding to the progress of construction.<br><br>A subsidy of Rs.1.20 lakh to beneficiary of General Category and a subsidy of Rs.1.75 lakh to the beneficiary under Scheduled Caste and Scheduled Tribe Category in rural areas and similarly an amount of Rs.2.00 lakh subsidy is given to Scheduled Caste and Scheduled Tribe Beneficiary in urban areas. |
| C | Has it come to the notice of the Government that Mathsyashraya Scheme has not been implemented in Mandya district during 2019-20. | During 2019-20 no houses have been sanctioned in the State under Mathsyashraya Scheme. Therefore no houses have been distributed to Mandya District. |
| D | If so, what are the measures that Government shall take? | Mathsyashraya houses shall be distributed depending on the availability of grants and demand for houses. |

No. AHF E-165 SFS 2020

(KOTA SRINIVASA POOJARY)
Minister for Muzrai, Fisheries,
Ports and Inland Water Transport

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆಸಂಖ್ಯೆ: 420 ಕ್ಕೆ**

**ಅನುಬಂಧ**

**ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಅನುಸರಿಸುವ ಮಾನದಂಡ ಹಾಗೂ ಆಯ್ಕೆ ಸಮಿತಿ ವಿವರ ಈ ಕೆಳಗಿನಂತಿರುತ್ತದೆ.**

1) ಫಲಾನುಭವಿಯು ಹುಟ್ಟು / ವೃತ್ತಿಯಲ್ಲಿ ಮೀನುಗಾರನಾಗಿರಬೇಕು, ಮೀನುಗಾರಿಕೆಗೆ ಪೂರಕವಾದ ಚಟುವಟಿಕೆಗಳಲ್ಲಿ ತೊಡಗಿರುವವರನ್ನು ಸಹ ಆಯ್ಕೆ ಮಾಡಬಹುದಾಗಿದೆ.

2) ಫಲಾನುಭವಿಯು ವಿವಾಹಿತನಾಗಿರಬೇಕು

3) ಫಲಾನುಭವಿಯು ಸ್ವಂತ ನಿವೇಶನ ಹೊಂದಿರತಕ್ಕದ್ದು.

4) ಫಲಾನುಭವಿಯು ಸ್ಥಳೀಯ ಮೀನುಗಾರರ ಸಹಕಾರ ಸಂಘದ ಸದಸ್ಯನಾಗಿರಬೇಕು. ಇಲ್ಲದಿದ್ದಲ್ಲಿ ಕಳೆದ ಮೂರು ವರ್ಷಗಳಿಂದ ಮೀನುಗಾರಿಕೆಯಲ್ಲಿ ತೊಡಗಿರುವ ಬಗ್ಗೆ ಸಂಬಂಧಿಸಿದ ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-2) ದೃಢೀಕರಿಸಬೇಕು.

5) ಫಲಾನುಭವಿಯು ಸರ್ಕಾರದ ಇತರೆ ವಸತಿ ಯೋಜನೆಯಡಿ ಸೌಲಭ್ಯವನ್ನು ಪಡೆದಿರಬಾರದು. ಈ ಬಗ್ಗೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿ, ಮುನಿಸಿಪಾಲಿಟಿ, ನಗರಸಭೆ ಮುಂತಾದ ಸಂಸ್ಥೆಗಳಿಂದ ದೃಢೀಕರಣ ಹೊಂದಿರತಕ್ಕದ್ದು.

6) ಫಲಾನುಭವಿಯು ಆರ್ಥಿಕವಾಗಿ ಹಿಂದುಳಿದವರಾಗಿರತಕ್ಕದ್ದು.

**ಆಯ್ಕೆ ಸಮಿತಿ ವಿವರ**

**ಅಧ್ಯಕ್ಷರು**: ಅಯಾ ವಿಧಾನ ಸಭಾ ಕ್ಷೇತ್ರದ ಶಾಸಕರು

**ಸದಸ್ಯರು**: ವಿಧಾನ ಪರಿಷತ್ತಿನ ಸದಸ್ಯರು (ಅವರ ವ್ಯಾಪ್ತಿಯಲ್ಲಿ ಅಪೇಕ್ಷಿಸಿದ ಯಾವುದಾದರೊಂದು ವಿಧಾನ ಸಭಾ ಕ್ಷೇತ್ರಕ್ಕೆ ಸೀಮಿತವಾದಂತೆ)

**ಸದಸ್ಯ ಕಾರ್ಯದರ್ಶಿ**: ಸಂಬಂದಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-2).

ಮತ್ಸ್ಯಾಶ್ರಯ ಯೋಜನೆಯಡಿ ವಸತಿ ಸೌಲಭ್ಯವನ್ನು ಪಡೆಯುವ ಫಲಾನುಭವಿಯು ಮೇಲೆ ಪಟ್ಟಿ ಮಾಡಲಾದ ಅರ್ಹತೆಗಳ ಮೇರೆಗೆ ಆಯ್ಕೆ ಸಮಿತಿಯು ಕಾರ್ಯನಿರ್ವಹಿಸುತ್ತದೆ.

******

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆಸಂಖ್ಯೆ: 420 ಕ್ಕೆ ಪೂರಕ ಟಿಪ್ಪಣಿ

ರಾಜ್ಯ ಸರ್ಕಾರವು ಕೇಂದ್ರ ಪುರಸ್ಕೃತ ರಾಷ್ಟ್ರೀಯ ಮೀನುಗಾರರ ಕಲ್ಯಾಣ ನಿಧಿ ಯೋಜನೆಯಡಿ ಮೀನುಗಾರರ ಮಾದರಿ ಗ್ರಾಮಗಳ ಅಭಿವೃದ್ಧಿ ಯೋಜನೆಯನ್ನು 1987-88 ರಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ಸ್ವಂತ ನಿವೇಶನ ಹೊಂದಿರುವ ನಿರ್ವಸತಿ ಮೀನುಗಾರರಿಗೆ 1987 ರಿಂದ 2017-18ರವರೆಗೆ ಒಟ್ಟು 41905 ಮನೆಗಳು ಮಂಜೂರಾಗಿರುತ್ತದೆ (2006-07 ನೇ ಸಾಲಿನಿಂದ 2012-13 ನೇ ಸಾಲಿನವರೆಗೆ ಅನುಮೋದನೆಯಾಗದ ಹಾಗೂ ಅನುಮೋದನೆಗೊಂಡು ಪ್ರಾರಂಭವಾಗದ 621 ಮನೆಗಳನ್ನು ರದ್ದುಗೊಳಿಸಿ 2016-17 ನೇ ಸಾಲಿಗೆ 2000 ಮನೆಗಳನ್ನು ಮರುಹಂಚಿಕೆ ಮಾಡಲಾಗಿದೆ). ತದನಂತರ 2014-15 ನೇ ಸಾಲಿನಿಂದ 2017-18 ನೇ ಸಾಲಿನವರೆಗೆ ಮಂಜೂರಾದ ಮನೆಗಳಲ್ಲಿ ಆಯ್ಕೆಯಾಗದ ಮನೆಗಳನ್ನು ರದ್ದುಗೊಳಿಸಿ 2570 ಮನೆಗಳನ್ನು 2018-19 ನೇ ಸಾಲಿಗೆ ಮರುಹಂಚಿಕೆ ಮಾಡಲು ಕ್ರಮವಹಿಸಿದ್ದು ಈ ಪೈಕಿ 1575 ಮನೆಗಳನ್ನು 2018-19ನೇ ಸಾಲಿಗೆ ಹಂಚಿಕೆ ಮಾಡಲಾಗಿದೆ. ಫಲಾನುಭವಿಗಳೇ ಮನೆಯ ನಿರ್ಮಾಣವನ್ನು ಮಾಡಿಕೊಳ್ಳುತ್ತಿದ್ದು, ಕಾಮಗಾರಿಯ ಪ್ರಗತಿಗನುಗುಣವಾಗಿ ಸರ್ಕಾರದಿಂದ ನೇಮಕ ಮಾಡಲಾದ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ಸಂಸ್ಥೆಯಿಂದ ಸಹಾಯಧನ ಮೊತ್ತವನ್ನು ಮೂರು ಕಂತುಗಳಲ್ಲಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆಮಾಡಲಾಗುತ್ತಿದೆ.

ಸರ್ಕಾರವು 2017-18 ನೇ ಸಾಲಿಗೆ ರೂ 4016.20 ಲಕ್ಷಗಳ ವೆಚ್ಚದಲ್ಲಿ 3000 ಮನೆಗಳನ್ನು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಮೂಲಕ ಅನುಷ್ಠಾನಗೊಳಿಸಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು. ಸದರಿ ಮಾರ್ಗಸೂಚಿಯಲ್ಲಿ ಪ್ರತಿ ಮನೆಗೆ ಮೀನುಗಾರಿಕೆ ಇಲಾಖೆಯಿಂದ ಸಾಮಾನ್ಯ ಫಲಾನುಭವಿಗಳಿಗೆ ರೂ. 1.20 ಲಕ್ಷ, ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದವರಿಗೆ ರೂ. 1.75 ಲಕ್ಷ ಹಾಗೂ ನಗರ ಪ್ರದೇಶದ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದವರಿಗೆ ರೂ. 2.00 ಲಕ್ಷ ಸಹಾಯ ಧನ ನೀಡುವ ಅವಕಾಶ ಕಲ್ಪಿಸಿದೆ. ಸದರಿ ಮನೆಗಳ ಅನುಷ್ಠಾನಕ್ಕಾಗಿ ರಾಜೀವ ಗಾಂಧಿ ಗ್ರಾಮೀಣ ವಸತಿ ನಿಗಮಕ್ಕೆ ರೂ.2470.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿತ್ತು. ರಾಜೀವ್ ಗಾಂಧಿ ವಸತಿ ನಿಗಮದಿಂದ ಈ ಯೋಜನೆಯ ಅನುಷ್ಠಾನವು ತಾಂತ್ರಿಕ ಕಾರಣಗಳಿಂದಾಗಿ ವಿಳಂಬವಾಗುತ್ತಿದ್ದು, ಇದನ್ನು ಸರಿಪಡಿಸಲು ನಿಗಮದ ಅಧಿಕಾರಿಗಳ ಜೊತೆ ಸಭೆ ಏರ್ಪಡಿಸಿ ಅನುಷ್ಠಾನವನ್ನು ತ್ವರಿತಗೊಳಿಸಲು ಸೂಚಿಸಲಾಗಿತ್ತು, ವ್ಯವಸ್ಥಾಪಕರು ನಿರ್ದೇಶಕರು, ರಾಜೀವ್ ಗಾಂಧಿ ವಸತಿ ನಿಗಮ, ಬೆಂಗಳೂರುರವರು ರಾಜ್ಯದಲ್ಲಿ ಲಕ್ಷಾಂತರ ಮನೆಗಳ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿರುವ ಕಾರಣ

ಮೀನುಗಾರಿಕೆ ಇಲಾಖೆಯ 3000 ಮನೆಗಳ ಅನುಷ್ಠಾನದ ಬಗ್ಗೆ ವಿಶೇಷ ಗಮನ ನೀಡಲು ಸಾಧ್ಯವಾಗುತ್ತಿಲ್ಲವೆಂದು ತಿಳಿಸಿರುತ್ತಾರೆ. ಮುಂದುವರೆದು, 2018-19 ನೇ ಸಾಲಿನಲ್ಲಿ ನೆರೆ ಹಾವಳಿಯಿಂದ ಕೆಲವು ಜಿಲ್ಲೆಯಲ್ಲಿನ ಗ್ರಾಮಗಳು ಸಂಪೂರ್ಣವಾಗಿ ನೀರಿನಿಂದ ಮುಳುಗಿದ್ದು, ನೆರೆಸಂತ್ರಸ್ಥರಿಗೆ ವಸತಿ ಸೌಕರ್ಯ ಕಲ್ಪಿಸುವ ಜವಾಬ್ದಾರಿಯನ್ನು ಸರ್ಕಾರವು ರಾಜೀವ್ ಗಾಂಧಿ ವಸತಿ ನಿಗಮಕ್ಕೆ ವಹಿಸಿರುವುದರಿಂದ ಹೆಚ್ಚಿನ ಕೆಲಸದ ಒತ್ತಡ ಇರುವುದರಿಂದ ಇಲಾಖೆಯಿಂದ ನೀಡಲಾಗಿರುವ ಮನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ, ಅನುಮೋದನೆಗೊಂಡ ಮನೆಗಳಲ್ಲಿ 43 ಮನೆಗಳಿಗೆ ಈಗಾಗಲೇ ನಿಗದಿಪಡಿಸಿರುವ ಸಹಾಯಧನವನ್ನು (ಸಾಮಾನ್ಯ ವರ್ಗದ ಫಲಾನುಭವಿಗೆ ರೂ 1.20 ಲಕ್ಷಗಳು, ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ/ಪಂಗಡದ ಫಲಾನುಭವಿಯಾಗಿದ್ದಲ್ಲಿ ರೂ 1.75 ಲಕ್ಷ ಹಾಗೂ ನಗರ ಪ್ರದೇಶದ ಪರಿಶಿಷ್ಟ ಜಾತಿ/ಪಂಗಡದ ಫಲಾನುಭವಿಯಾಗಿದ್ದಲ್ಲಿ ರೂ 2.00 ಲಕ್ಷಗಳು) ಫಲಾನುಭವಿಗಳಿಗೆ ಬಿಡುಗಡೆಗೊಳಿಸಲು ಕ್ರಮ ವಹಿಸಿ ಬಾಕಿ ಉಳಿದ ರೂ. 24,17,30,000/- ಗಳ ಅನುದಾನವನ್ನು ಗುರಿಯೊಂದಿಗೆ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ , ಮಂಗಳೂರು ಇವರಿಗೆ ಬಿಡುಗಡೆ ಮಾಡಲಾಗಿದೆ.

2014-15ನೇ ಸಾಲಿನಿಂದ 2017-18ನೇ ಸಾಲಿನವರೆಗೆ ಅನುಮೋದನೆಯಾಗದ 2674 ಮನೆಗಳ ಪೈಕಿ 2570 ಮನೆಗಳನ್ನು ಮರುಹಂಚಿಕೆ ಮಾಡಿದ್ದು, ಹಲವು ವಿಧಾನಸಭಾ ಕ್ಷೇತ್ರಗಳಲ್ಲಿ ಅರ್ಹ ಮೀನುಗಾರ ಫಲಾನುಭವಿಗಳು ಇದ್ದರೂ ಸಹ ಅಂತಹ ಕ್ಷೇತ್ರಗಳಿಗೆ ಮನೆಗಳು ಹಂಚಿಕೆಯಾಗದ ಬಗ್ಗೆ, 2018-19ನೇ ಸಾಲಿನ ಆದೇಶವನ್ನು ಪುನರ್ ಪರಿಶೀಲಿಸಲು ಬೇಡಿಕೆ ಬಂದ ಹಿನ್ನೆಲೆಯಲ್ಲಿ ಈ ಮನೆಗಳ ಮರು ಹಂಚಿಕೆಗೆ ಕ್ರಮವಹಿಸಿದ್ದು, 2018-19ನೇ ಸಾಲಿಗೆ 2570 ಮನೆಗಳ ಪೈಕಿ ಮರು ಹಂಚಿಕೆಯಾದ 1575 ಮನೆಗಳನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಮೂಲಕ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುತ್ತಿದೆ.

2019-20ನೇ ಸಾಲಿಗೆ ಯಾವುದೇ ಮನೆಗಳು ಮಂಜೂರಾಗಿರುವುದಿಲ್ಲವಾದ್ದರಿಂದ ಮಂಡ್ಯ ಜಿಲ್ಲೆಯಲ್ಲಿ ಮತ್ಸ್ಯಾಶ್ರಯ ಯೋಜನೆಯಡಿ ಯಾವುದೇ ಮನೆಗಳು ಮಂಜೂರಾಗಿರುವುದಿಲ್ಲ. ಮತ್ಸ್ಯಾಶ್ರಯ ಯೋಜನೆಯಡಿ ಎಲ್ಲಾ ವರ್ಗದ ಮೀನುಗಾರಿಕೆ ವೃತ್ತಿಯಡಿ ತೊಡಗಿರುವ ನಿರ್ವಸತಿ ಮೀನುಗಾರರಿಗೆ ವಸತಿ ನಿರ್ಮಾಣಕ್ಕೆ ಸಹಾಯಧನ ನೀಡಲಾಗುವುದು.

******